9-330-40

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎನ್. ರವಿಕುಮಾರ್ ಇವರು ನಿಯಮ-330ರಡಿಯಲ್ಲಿ ಐಎಂಎ ಹಗರಣದಲ್ಲಿ ಭಾಗಿಯಾಗಿರುವ ಐಪಿಎಸ್ ಅಧಿಕಾರಿಗಳ ವಿರುದ್ಧ ಕ್ರಮಕೈಗೊಳ್ಳದೆ ಇರುವ ಮತ್ತು ಅಧಿಕಾರಿಗಳನ್ನು ಆಯಕಟ್ಟಿನ ಜಾಗಕ್ಕೆ ನೇಮಿಸಿದ ಬಗ್ಗೆ ನೀಡಿರುವ ಸೂಚನೆಗೆ ಮಾಹಿತಿ ನೀಡುವ ಬಗ್ಗೆ.**

*****

ಐಎಂಎ ಹಗರಣಕ್ಕೆ ಸಂಬಂಧಿಸಿದಂತೆ, ಸಿಬಿಐ ಸಂಸ್ಥೆ ಸಲ್ಲಿಸಿದ ತನಿಖಾ ವರದಿಯಲ್ಲಿ ಐಎಎಸ್ ಅಧಿಕಾರಿಯಾದ ಶ್ರೀ ಬಿ. ಎಂ. ವಿಜಯ್ ಶಂಕರ್ ಮತ್ತು ಐಪಿಎಸ್ ಅಧಿಕಾರಿಗಳಾದ ಶ್ರೀ ಹೇಮಂತ್ ನಿಂಬಾಳ್ಕರ್ ಹಾಗೂ ಶ್ರೀ ಅಜಯ್ ಹಿಲೋರಿ ಇವರ ವಿರುದ್ಧ ಅಭಿಯೋಜನಾ ಮಂಜೂರಾತಿ ನೀಡುವಂತೆ ಮತ್ತು ಇಲಾಖಾ ವಿಚಾರಣೆ ನಡೆಸಲು ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗಿರುತ್ತದೆ.

ಈ ಪ್ರಕರಣದಲ್ಲಿ ಆರೋಪಿತರೆಂದು ಸಿಬಿಐ ವರದಿಯಲ್ಲಿ ತಿಳಿಸಲಾಗಿರುವ ಇಬ್ಬರು ಐಪಿಎಸ್ ಅಧಿಕಾರಿಗಳನ್ನು ಅಭಿಯೋಜನೆಗೆ ಒಳಪಡಿಸಲು ಸರ್ಕಾರದಿಂದ ಅಭಿಯೋಜನಾ ಮಂಜೂರಾತಿ ನೀಡಲಾಗಿದೆ ಮತ್ತು ಭ್ರಷ್ಟಾಚಾರ ನಿಗ್ರಹ ಕಾಯ್ದೆ ಅಡಿಯಲ್ಲಿ ಪ್ರಕರಣದ ಮುಂದುವರೆದ ತನಿಖೆಯನ್ನು ಕೈಗೊಳ್ಳಲು ಸದರಿ ಕಾಯ್ದೆಯ 17(ಎ) ಅಡಿಯಲ್ಲಿ ಸಿಬಿಐ ಸಂಸ್ಥೆಗೆ ಸರ್ಕಾರವು ಮಂಜೂರಾತಿ ನೀಡಲಾಗಿದೆ.

ಅಲ್ಲದೆ ಐ.ಎಂ.ಎ ಪ್ರಕರಣಕ್ಕೆ ಸಂಬಂಧಿಸಿದ ಘಟನೆಗಳು ಜರುಗಿದಾಗ ಅಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದ ಹುದ್ದೆಗಳಿಂದ ಬೇರೆ ಹುದ್ದೆಗಳಿಗೆ ವರ್ಗಾಯಿಸಲಾಗಿದೆ.

ಪ್ರಸ್ತುತ ಪ್ರಕರಣದಲ್ಲಿ ಆರೋಪಿಸಲಾಗಿರುವ ಐಪಿಎಸ್ ಅಧಿಕಾರಿಗಳ ವಿರುದ್ಧ ಇಲಾಖಾ ವಿಚಾರಣೆ ಪ್ರಾರಂಭಿಸಿ, ಪ್ರಥಮ ಹಂತದಲ್ಲಿ, ಆರೋಪ ಪಟ್ಟಿಯನ್ನು ಜಾರಿ ಮಾಡಲಾಗುತ್ತಿದೆ.

ಸಿಬಿಐ ಸಂಸ್ಥೆಯ ಶಿಫಾರಸ್ಸಿನಂತೆ ನಿಯಮಾನುಸಾರ ಅಗತ್ಯ ಕ್ರಮಗಳನ್ನು ಸರ್ಕಾರದಿಂದ ಕೈಗೊಳ್ಳಲಾಗಿದೆ.

ಐಎಎಸ್ ಅಧಿಕಾರಿಯಾದ ಶ್ರೀ ಬಿ. ಎಂ. ವಿಜಯ್ ಶಂಕರ್ ಇವರನ್ನು 48 ಗಂಟೆಗಿಂತಲೂ ಹೆಚ್ಚಿನ ಅವಧಿಗೆ ನ್ಯಾಯಾಂಗ ಬಂಧನದಲ್ಲಿಟ್ಟಿದ್ದರಿಂದ ಅಖಿಲ ಭಾರತ ಸೇವೆಗಳು(ಶಿಸ್ತು ಪ್ರಕರಣ ಮತ್ತು ಮೇಲ್ಮನವಿ) ನಿಯಮಗಳು 1969ರ ನಿಯಮ 3(2)(ಎ)ರಡಿ ಅಮಾನತ್ತುಗೊಳಿಸಲಾಗಿತ್ತು. ಪ್ರಸ್ತುತ ಅಧಿಕಾರಿಯವರು ಮೃತರಾಗಿರುವುದರಿಂದ ಇವರ ವಿರುದ್ಧ ಮುಂದಿನ ಕ್ರಮ ಇರುವುದಿಲ್ಲ.

ಸಿಆಸುಇ 10 ಎಸ್‌ಪಿಪಿ 2021

ಬಿ.ಎಸ್.

(ಬಿ. ಎಸ್. ಯಡಿಯೂರಪ್ಪ)
ಮುಖ್ಯಮಂತ್ರಿ